ಶ್ರೀ ಬಸವರಾಜ ಎಸ್ ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) ಬೆಳಗಾಂವ ಜಿಲ್ಲೆ ಸವದತ್ತಿ ತಾಲ್ಲೂಕಿನಲ್ಲಿರುವ ಉರ್ದು ಹಿರಿಯ ಪ್ರಾಥಮಿಕ ಶಾಲೆಗಳ ಸಂಖ್ಯೆ 07, ಕಿರಿಯ ಪ್ರಾಥಮಿಕ ಶಾಲೆಗಳ ಸಂಖ್ಯೆ 15

ಆ) ಸವದತ್ತಿ ತಾಲ್ಲೂಕಿನಲ್ಲಿನ ಉರ್ದು ಪ್ರಾಥಮಿಕ ಶಾಲೆಗಳಲ್ಲಿ ಮಂಜೂರಾದ ಶಿಕ್ಷಕರ ಸಂಖ್ಯೆ 50, ಖಾಲಿಯಿರುವ ಶಿಕ್ಷಕರ ಸಂಖ್ಯೆ 12

ಇ) * ಸವದತ್ತಿ ತಾಲ್ಲೂಕಿನಲ್ಲಿನ ಉರ್ದು ಪ್ರಾಥಮಿಕ ಶಾಲೆಗಳಲ್ಲಿ 2005–06ನೇ ಸಾಲಿನಲ್ಲಿ 08 ಹುದ್ದೆಗಳನ್ನು ನೇಮಕಾತಿ ಮಾಡಲಾಗಿದೆ

* 2006–07ನೇ ಸಾಲಿನಲ್ಲಿ ಸವದತ್ತಿ ತಾಲ್ಲೂಕಿನಲ್ಲಿನ ಉರ್ದು ಪ್ರಾಥಮಿಕ ಶಾಲೆಗಳಲ್ಲಿ ಖಾಲಿಯಿರುವ 10 ಶಿಕ್ಷಕರನ್ನು ನೇಮಕಾತಿ ಮಾಡುವ ವಿಚಾರದಲ್ಲಿ ದಿನಾಂಕ 11 1 2007ರಲ್ಲಿ ಸರ್ಕಾರದಿಂದ ಅಧಿಸೂಚನೆ ಹೊರಡಿಸಲಾಗಿದೆ

ಈ) * ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ಖಾಲಿಯಿರುವ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡಲಾಗುತ್ತಿದೆ ಪ್ರಸ್ತುತ ರಾಜ್ಯದಲ್ಲಿ ಖಾಲಿಯಿರುವ 7,753 ಸರ್ಕಾರಿ ಪ್ರಾದಮಿಕ ಶಾಲಾ ಶಿಕ್ಷಕರನ್ನು ಭರ್ತಿ ಮಾಡುವ ವಿಚಾರದಲ್ಲಿ ಸರ್ಕಾರದಿಂದ ದಿ 11 1 2007ರಲ್ಲಿ ಅಧಿಸೂಚನೆ ಹೊರಡಿಸಲಾಗಿದೆ ಇದರ ಜೊತೆಗೆ ರಾಜ್ಯದಲ್ಲಿ ಒಟ್ಟು ಖಾಲಿಯಿರುವ 626 ವಿಶೇಷ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡಲು ದಿ 1 2 2007ರಂದು ಸರ್ಕಾರದಿಂದ ನೇಮಕಾತಿ ಅಧಿಸೂಚನೆ ಹೊರಡಿಸಲಾಗಿದೆ

509(551) ಶ್ರೀ ಮಾಮನಿ ವಿಶ್ವನಾಥ ಕರಬಸಪ್ಪ (ಪರಸಗಡ) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ,

ಅ) 2006–07ನೇ ಸಾಲಿನಲ್ಲಿ ಪ್ರೌಡಶಾಲೆಗಳ ಮಂಜೂರಾತಿ ಕುರಿತು ಸಲ್ಲಿಸಿದ ಪ್ರಸ್ತಾವನೆಗಳ ಸಂಖ್ಯೆ ಎಷ್ಟು,

ಆ) ಪ್ರಸಕ್ತ ಸಾಲಿನಲ್ಲಿ ಮಂಜೂರಾದ ಪ್ರೌಢಶಾಲೆಗಳ ಸಂಖ್ಯೆ ಎಷ್ಟು,

ಇ) ಪ್ರಸ್ತಾವನೆಗಳಲ್ಲಿ ಬಾಕಿ ಉಳಿದ ಪ್ರೌಢಶಾಲೆಗಳ ಮಂಜೂರಾತಿ ಕುರಿತು ಸರ್ಕಾರದ ಕ್ರಮವೇನು?

ಶ್ರೀ ಬಸವರಾಜ ಎಸ್ ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) 365

ಆ) 485

ಇ) ಆಯವ್ಯಯದಲ್ಲಿನ ಅವಕಾಶ ಹಾಗೂ ಶೈಕ್ಷಣಿಕ ಅಗತ್ಯತೆ, ಇವುಗಳನ್ನು ಗಮನದಲ್ಲಿಟ್ಟುಕೊಂಡು, ಹೊಸ ಸರ್ಕಾರಿ ಪ್ರೌಢಶಾಲೆಗಳನ್ನು ಹಂತ ಹಂತವಾಗಿ ಮಂಜೂರು ಮಾಡಲಾಗುತ್ತಿದೆ

510(552) ಶ್ರೀ ಮಾಮನಿ ವಿಶ್ವನಾಥ ಕರಬಸಪ್ಪ (ಪರಸಗಡ) ಮಾನ್ಯ ಜಲಸಂಪನ್ಮೂಲ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ,

ಅ) 2006–07ನೇ ಸಾಲಿನಲ್ಲಿ ಮಲಪ್ರಭಾ ಯೋಜನೆ ಮುಖ್ಯ ಕಾಲುವೆಗಳ ಸುಧಾರಣೆ ಕುರಿತು ಬಿಡುಗಡೆಯಾದ ಅನುದಾನವೆಷ್ಟು, ಅದರಲ್ಲಿ ವೆಚ್ಚ ಮಾಡಿದ ಹಣವೆಷ್ಟು,

ಆ) ಕಾಲುವೆಗಳ ಸುಧಾರಣೆ ಪೂರ್ಣಗೊಂಡಿದೆಯೇ, (ವಿವರ ನೀಡುವುದು)

ಇ) ಅಚ್ಚುಕಟ್ಟು ಪ್ರದೇಶದ ಕೊನೆಯ ಹಂತದ ರೈತರಿಗೆ ಹಂಚು ಕಾಲುವೆಗಳ ಸುಧಾರಣೆ ಲಾಭ ಲಭ್ಯವಾಗಿದೆಯೇ?

ಶ್ರೀ ಕೆ ಎಸ್ ಈಶ್ವರಪ್ಪ (ಜಲಸಂಪನ್ಮೂಲ ಸಚಿವರು)

ಅ) ಮಲಪ್ರಭಾ ಬಲದಂಡೆ ನಾಲೆಯ ಸುಧಾರಣೆ ಕಾಮಗಾರಿಗಳಿಗಾಗಿ 2006–07ನೇ ಸಾಲಿಗೆ ರೂ 1707 00 ಲಕ್ಷಗಳ ಅನುದಾನ ನಿಗದಿಪಡಿಸಲಾಗಿರುತ್ತದೆ ಡಿಸೆಂಬರ್ 2006ರ ಅಂತ್ಯದವರೆಗೆ ರೂ 191 41 ಲಕ್ಷಗಳು ವೆಚ್ಚವಾಗಿರುತ್ತವೆ